# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

KANNADA POST

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನ ಪತ್ರಿಕೆ Kannada Daily

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 199 | Pages. 2 | Date: 17-06-2025, TUESDAY | RNI NO: KARKAN/2024/89601

ಸಂಪುಟ : 01 - ಸಂಚಿಕೆ : 199 - ಪುಟಗಳು : 2 - 17 ಜೂನ್ 2025 ಮಂಗಳವಾರ | Ph: 8762954248 | ದರ : ₹1


# ಇಸ್ರೇಲ್‌ನಲ್ಲಿ ಬಂಧಿಯಾದ ಆಲೂರಿನ 30 ಜನರು

## ಇರಾನ್-ಇಸ್ರೇಲ್ ಯುದ್ಧ ಕಾರ್ಮೋಡ | ಸಂಬಂಧಿಕರಲ್ಲಿ ಹೆಚ್ಚಿದ ಆತಂಕ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಇಸ್ರೇಲ್-ಇರಾನ್‌ನ ನಡುವೆ ನಡೆಯುತ್ತಿರುವ ಯುದ್ಧ ಭೀತಿ ಹಾಸನ ಜಿಲ್ಲೆಯಲ್ಲೂ ಆತಂಕ ಸೃಷ್ಟಿಸಿದ್ದು ಉದ್ಯೋಗ ಅರಸಿ ಇಸ್ರೇಲ್‌ನಲ್ಲಿ ವಾಸವಾಗಿರುವ ತಾಲ್ಲೂಕಿನ 30ಕ್ಕೂ ಹೆಚ್ಚು ಜನರು ರಕ್ಷಣೆಗೆ ಅಂಗಲಾಚಿದ್ದಾರೆ.

ತಾಲ್ಲೂಕಿನ ಮಗ್ಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಠದಕೊಪ್ಪಲು, ನವಿಲಹಳ್ಳಿ ಮತ್ತು ಬಡಗಿಪುರ ಗ್ರಾಮದ ಪುರುಷರು, ಮಹಿಳೆಯರು ಸೇರಿದಂತೆ 30 ಜನರು ಇಸ್ರೇಲ್‌ನಲ್ಲಿ ಹೋಂ ಟೇಕರ್ ಕೆಲಸಕ್ಕೆ ಹೋಗಿದ್ದಾರೆ.

ಸದ್ಯ ಇರಾನ್ ಮತ್ತು ಇಸ್ರೇಲ್ ಮಧ್ಯೆ ಯುದ್ಧ ನಡೆಯುತ್ತಿರುವುದರಿಂದ ಕುಟುಂಬಸ್ಥರು ಆತಂಕಕ್ಕೊಳಗಾಗಿದ್ದರೂ, ಆಗಾಗ ಫೋನ್ ಮೂಲಕ ಮಾತನಾಡುತ್ತಿರುವುದರಿಂದ ಧೈರ್ಯವಾಗಿದ್ದಾರೆ. 9 ವರ್ಷಗಳಿಂದ ಇಲ್ಲಿನ ನಿವಾಸಿಗಳು ಇಸ್ರೇಲ್‌ನ ಅಶ್‌ಮದ್ ಮತ್ತು ಇತರೆ ಸ್ಥಳಗಳಲ್ಲಿ ಕೆಲಸ ಮಾಡುತ್ತಿದ್ದಾರೆ. ಕಳೆದ ಬಾರಿ ಯುದ್ಧ ನಡೆದ ಸಂದರ್ಭದಲ್ಲಿ 21 ಜನರು ಇಸ್ರೇಲ್‌ನಲ್ಲಿದ್ದರು. ಮೂರು ವರ್ಷಗಳಿಂದೀಚೆಗೆ 9 ಜನರು ಹೋಗಿದ್ದಾರೆ. ನನ್ನ ಪತ್ನಿ ಅನ್ನಿಲಾ ಇಸ್ರೇಲ್‌ನ ಅಶ್‌ಮದ್ ಪ್ರದೇಶದ ಮನೆಯೊಂದರಲ್ಲಿ ಹೋಂ ಟೇಕರ್ ಕೆಲಸ ಮಾಡುತ್ತಿದ್ದಾರೆ. ಮೊದಲು ಎಲ್ಲ ಸಂದರ್ಭದಲ್ಲೂ ಸಂಪರ್ಕದಲ್ಲಿ ಇರುತ್ತಿದ್ದರು. ಯುದ್ಧದ ಪರಿಸ್ಥಿತಿ ನಿರ್ಮಾಣವಾದ ನಂತರ, ಪ್ರತಿದಿನ ಬೆಳಿಗ್ಗೆ ಮತ್ತು ರಾತ್ರಿ 11ಕ್ಕೆ ಮಾತ್ರ ಮಾತನಾಡುತ್ತಾರೆ ಎಂದು ನವಿಲಹಳ್ಳಿಯ ಸ್ಟ್ಯಾನ್ಲಿ ತಿಳಿಸಿದರು.

ಯುದ್ಧಕ್ಕೆ ಸಂಬಂಧಿಸಿದಂತೆ ಸೈರನ್ ಶಬ್ದ ಕೇಳಿಸುತ್ತದೆ. ಮೊಬೈಲ್‌ಗೆ ಮೆಸೇಜ್ ಬರುತ್ತದೆ. ಆಗ ರಕ್ಷಣೆಗಾಗಿ ತಕ್ಷಣ ಬಂಕರ್‌ಗೆ ಹೋಗಿ ಸೇರಿಕೊಳ್ಳುತ್ತಾರೆ. ಹೊರಗಡೆ ಯಾರೂ ತಿರುಗಾಡದಂತೆ ನಿಷೇಧ ಹೇರಿದ್ದಾರೆ. ಸದ್ಯಕ್ಕೆ ಯಾವುದೇ ಆತಂಕಪಡುವಂತಿಲ್ಲ ಎಂದು ಪತ್ನಿ ತಿಳಿಸಿದ್ದಾರೆ ಎಂದು ಅವರು ಹೇಳಿದರು.



### ಪ್ರತಿದಿನ ಭಯ ಹೆಚ್ಚುತ್ತಿದೆ

ಇಸ್ರೇಲ್‌ನಲ್ಲಿ ವಾಸವಿರುವ ಸುಜಾತ ಅವರ ಪತಿ ಸಬಾಸ್ಟಿನ್ ಮಾತನಾಡಿ, ಸದ್ಯದ ಬೆಳವಣಿಗೆಗಳನ್ನು ಗಮನಿಸಿದರೆ ಎಂತವರಿಗಾದರೂ ಭಯವಾಗುತ್ತದೆ. ಇಸ್ರೇಲ್‌ನಿಂದ ವಿಮಾನ ಯಾನವೂ ಬಂದ್ ಆಗಿದೆ. ಹೀಗಾಗಿ ಸುರಕ್ಷತೆ ಬಗ್ಗೆ ಆತಂಕ ಕಾಡುತ್ತಿದೆ ಎಂದರು.

ಇಸ್ರೇಲ್ ಮತ್ತು ಇರಾನ್ ನಡುವಿನ ಕದನ ಯಾವ ಹಂತಕ್ಕೆ ತಲುಪಲಿದೆ ಎನ್ನುವುದು ಅಂದಾಜು ಸಿಗುತ್ತಿಲ್ಲ. ಭಾರತ ಮೂಲದ ಪ್ರಜೆಗಳಿಗೆ ಒಂದು ಕಡೆ ಹೊಟ್ಟೆಪಾಡಿನ ಪ್ರಶ್ನೆಯಾದರೆ ಇತ್ತ ಇಸ್ರೇಲ್‌ನಲ್ಲಿರುವ ಭಾರತದ ಸಂಬಂಧಿಕರ ಆತಕಂವು ಹೆಚ್ಚಾಗಿದೆ.

### ಕನ್ನಡಿಗರ ಸಂಪರ್ಕದಲ್ಲಿ ಹೆಚ್‌ಡಿಕೆ

ಕೇಂದ್ರ, ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷದಿಂದಾಗಿ ಪ್ರಸ್ತುತ ಇಸ್ರೇಲ್‌ನಲ್ಲಿ ಸಿಲುಕಿರುವ ಕನ್ನಡಿಗರೊಂದಿಗೆ ವೀಡಿಯೋ ಕರೆ ಮಾಡಿ ಅವರ ಕ್ಷೇಮ, ಸುರಕ್ಷತೆ ಬಗ್ಗೆ ಮಾಹಿತಿ ಪಡೆದುಕೊಂಡರು.

ನವದೆಹಲಿಯ ತಮ್ಮ ಅಧಿಕೃತ ನಿವಾಸದಿಂದ ಇಸ್ರೇಲ್‌ನಲ್ಲಿ ಸಿಲುಕಿರುವ ಕನ್ನಡಿಗರ ಜತೆ ಮಾತನಾಡಿದರು. ನಮ್ಮ ಜನರು ಸುರಕ್ಷಿತವಾಗಿ ಮತ್ತು ತ್ವರಿತವಾಗಿ ತಾಯ್ನಾಡಿಗೆ ಮರಳುವುದನ್ನು ಖಚಿತಪಡಿಸಿಕೊಳ್ಳಲು ವಿದೇಶಾಂಗ ಸಚಿವಾಲಯದೊಂದಿಗೆ ಈ ವಿಷಯವನ್ನು ತಕ್ಷಣವೇ ಚರ್ಚಿಸುವುದಾಗಿ ಹೇಳಿದರು.

ವಿಡಿಯೋ ಕರೆಯ ಮೂಲಕ ಮಾತನಾಡಿದ ಎಲ್ಲಾ ಕನ್ನಡಿಗರು, ತಾವು ಸುರಕ್ಷಿತರಾಗಿದ್ದೇವೆ ಮತ್ತು ಟೆಲ್ ಅವೀವ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯ ಅಧಿಕಾರಿಗಳು ಅಗತ್ಯವಿರುವ ಎಲ್ಲಾ ಸಹಾಯವನ್ನು ನೀಡುತ್ತಿದ್ದಾರೆ ಎಂದು ಸಚಿವರಿಗೆ ತಿಳಿಸಿದರು. ನಮ್ಮನ್ನು ಚೆನ್ನಾಗಿ ನೋಡಿಕೊಳ್ಳಲಾಗುತ್ತಿದೆ ಎಂದು ಸಚಿವರಿಗೆ ಮಾಹಿತಿ ನೀಡಿದರಲ್ಲದೆ, ಇದಕ್ಕಾಗಿ ರಾಯಭಾರ ಕಚೇರಿಗೆ ಕೃತಜ್ಞತೆಗಳನ್ನು ಸಲ್ಲಿಸಿದರು. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತ ಸರ್ಕಾರವು ವಿದೇಶದಲ್ಲಿರುವ ಭಾರತೀಯ ಪ್ರಜೆಗಳ ಸುರಕ್ಷತೆ ಮತ್ತು ಯೋಗಕ್ಷೇಮವನ್ನು ಖಚಿತಪಡಿಸಿಕೊಳ್ಳಲು ತನ್ನ ಎಲ್ಲವನ್ನೂ ಮಾಡುತ್ತಿದೆ ಎಂದು ಸಚಿವರು ಹೇಳಿದರು.



> ಪ್ರಸ್ತುತ ಸಂಘರ್ಷದ ವೇಳೆ ಇಸ್ರೇಲ್‌ನಲ್ಲಿ ಸಿಲುಕಿರುವ ಹಲವಾರು ಕನ್ನಡಿಗರೊಂದಿಗೆ ದೂರವಾಣಿಯಲ್ಲಿ ಮಾತನಾಡಿ ಅವರ ಕ್ಷೇಮ, ಸುರಕ್ಷತೆ ಬಗ್ಗೆ ವಿಚಾರಿಸಿದೆ. ಅವರೆಲ್ಲರೂ ತಾಯ್ನಾಡಿಗೆ ಸುರಕ್ಷಿತವಾಗಿ ಮತ್ತು ತ್ವರಿತವಾಗಿ ಮರಳುವುದಕ್ಕೆ ತುರ್ತು ಕ್ರಮ ವಹಿಸಿ, ವಿದೇಶ ಸಚಿವಾಲಯದ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸುವ ಭರವಸೆ ನೀಡಿದ್ದೇನೆ.
>
> **- ಹೆಚ್.ಡಿ. ಕುಮಾರಸ್ವಾಮಿ, ಕೇಂದ್ರ ಸಚಿವ**

# ನಿರಂತರ ಮಳೆಗೆ ಜನಜೀವನ ಅಸ್ತವ್ಯಸ್ತ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರ ಸೇರಿ ಜಿಲ್ಲಾದ್ಯಂತ ಕಳೆದ ಮೂರು ದಿನಗಳಿಂದ ವ್ಯಾಪಕ ಮಳೆಯಾಗುತ್ತಿದ್ದು ಜನಜೀವನ ಸಂಪೂರ್ಣ ಅಸ್ತವ್ಯಸ್ತವಾಗಿದೆ.

ಸಕಲೇಶಪುರ, ಆಲೂರು, ಬೇಲೂರು ಭಾಗದಲ್ಲಿ ಬಿರುಗಾಳಿ ಸಹಿತ ಧಾರಾಕಾರವಾಗಿ ಮಳೆಯಾಗುತ್ತಿದೆ. ಗೊರೂರಿನಲ್ಲಿರುವ ಜಿಲ್ಲೆಯ ಜೀವನದಿ ಹೇಮಾವತಿ ಜಲಾಶಯಕ್ಕೆ ಒಳಹರಿವು ಹೆಚ್ಚಾಗಿದೆ. 4642 ಕ್ಯುಸೆಕ್ ಒಳಹರಿವು ಇದೆ.

ವರುಣನ ಅಬ್ಬರ ಮುಂದುವರೆದಿರುವುದರಿಂದ ಮಲೆನಾಡು ಭಾಗದಲ್ಲಿ ವಿವಿಧ ರೀತಿಯ ಅನಾಹುತ ಘಟಿಸುತ್ತಿದೆ. ಬಿರುಗಾಳಿ ಸಹಿತ ಭಾರಿ ಮಳೆಯಾಗುತ್ತಿದೆ. ಮಳೆ ಗಾಳಿಗೆ ದೈತ್ಯಾಕಾರದ ಮರ ಧರೆಗುರುಳಿರುವ ಘಟನೆ ಸಕಲೇಶಪುರ ತಾಲ್ಲೂಕಿನ ದೋಣಿಗಾಲ್ ಬಳಿ ನಡೆದಿದೆ.

ರಾಷ್ಟ್ರೀಯ ಹೆದ್ದಾರಿ 75 ಶಿರಾಡಿಘಾಟ್ ರಸ್ತೆಯಲ್ಲಿ ಮರ ಧರಾಶಾಹಿಯಾಗಿದೆ. ತಡೆಗೋಡೆ ಕಾಮಗಾರಿ ನಡೆಯುತ್ತಿರುವುದರಿಂದ ಎರಡು ದಿನಗಳ ಹಿಂದೆಯಷ್ಟೇ ಒಂದು ಬದಿಯ ರಸ್ತೆ ಸಂಚಾರ ಬಂದ್ ಮಾಡಲಾಗಿತ್ತು.

ಇದರಿಂದ ಅದೃಷ್ಟವಶಾತ್ ಯಾವುದೇ ಅನಾಹುತ ಸಂಭವಿಸಿಲ್ಲ. ಮತ್ತೊಂದು ಬದಿಯ ರಸ್ತೆಯಲ್ಲಿ ಎಲ್ಲಾ ವಾಹನಗಳು ಸಂಚರಿಸುತ್ತಿವೆ. ಭಾರೀ ಮಳೆಯಾಗುತ್ತಿರುವುದರಿಂದ ಶಿರಾಡಿಘಾಟ್ ರಸ್ತೆಯಲ್ಲಿ ಯಾವುದೇ ಕ್ಷಣದಲ್ಲಾದರೂ ಮರಗಳು ಬೀಳುವ ಸಾಧ್ಯತೆಯಿದ್ದು, ಆತಂಕದ ನಡುವೆಯೂ ವಾಹನ ಸವಾರರು ಸಂಚರಿಸಬೇಕಾಗಿದೆ.

#### ಶಿರಾಡಿಘಾಟ್‌ಗೆ ಸಂಕಷ್ಟ

ಮಳೆಯಿಂದ ಶಿರಾಡಿಘಾಟ್‌ನ ಸಂಚಾರಕ್ಕೆ ಸಂಕಷ್ಟ ಎದುರಾಗಿದೆ. ಭಾರೀ ಗಾಳಿ ಮಳೆಗೆ ಎರಡೂ ಬದಿಯ ಭಾರೀ ಗಾತ್ರದ ಮರಗಳು ಬುಡಮೇಲಾಗಿ ಬಿದ್ದಿವೆ ಕೊಂಚ ಯಾಮಾರಿದರೂ ಪ್ರಾಣಕ್ಕೆ ಕುತ್ತು ಎದುರಾಗಲಿದೆ. ಚತುಷ್ಪಥ ರಸ್ತೆ ನಿರ್ಮಾಣಕ್ಕೆ ಕಡಿದಾಗಿ ರಸ್ತೆ ಬಗೆದಿರುವುದರಿಂದ ರಸ್ತೆಯ ಎಡ-ಬಲಗಳಲ್ಲಿರುವ ಮರಗಳು ಯಾವಾಗ ಬೀಳುತ್ತವೆಯೋ ಎಂಬ ಆತಂಕ ಶುರುವಾಗಿದೆ.

# ಮೃತ ಮರಿಯೊಂದಿಗೆ ತಾಯಿ ಆನೆ ರೋದನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ತಾಲ್ಲೂಕಿನ ಜಾಕನಹಳ್ಳಿ ಎಸ್ಟೇಟ್‌ನಲ್ಲಿ ಕಾಡಾನೆಯೊಂದು ತನ್ನ ಮೃತ ಮರಿಯೊಂದಿಗೆ ರೋದಿಸುತ್ತಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ಹೆತ್ತ ಕರುಳ ಕುಡಿಯ ಸಾವಿನಿಂದ ಕಂಗೆಟ್ಟ ತಾಯಿ ಆನೆ ಎಸ್ಟೇಟ್‌ನಲ್ಲಿ ಓಡಾಡಿರುವ ವಿಡಿಯೋ ಸ್ಥಳೀಯರ ಮೊಬೈಲ್‌ನಲ್ಲಿ ಸೆರೆಯಾಗಿದೆ. ಹೊಟ್ಟೆಯಲ್ಲಿರುವಾಗಲೇ ಮರಿಯಾನೆ ಸಾಯಲು ಕಾರಣ ಏನೆಂಬುದು ಮರಣೋತ್ತರ ಪರೀಕ್ಷೆಯಿಂದ ತಿಳಿಯಬೇಕಿದೆ.

ತಾಯಿ ಆನೆಯು ಆಕ್ರೋಶದಲ್ಲಿದ್ದು ಹತ್ತಿರಕ್ಕೆ ಯಾರೂ ಹೋಗುವಂತಿಲ್ಲ. ಜೊತೆಗೆ ಎಸ್ಟೇಟ್‌ನಲ್ಲಿ ಕಾಡಾನೆಗಳ ಹಿಂಡು ಬೀಡು ಬಿಟ್ಟಿರುವುದರಿಂದ ಅರಣ್ಯ ಇಲಾಖೆ ಸಿಬ್ಬಂದಿ ಸಹ ಅಂತರ ಕಾಯ್ದುಕೊಂಡಿದ್ದಾರೆ. ಮೃತ ಮರಿ ಆನೆಯ ಸುತ್ತಲು ತಾಯಿ ಆನೆ ಸುತ್ತಾಡುತ್ತಿರುವುದರಿಂದ ಮರಣೋತ್ತರ ಪರೀಕ್ಷೆ ನಡೆಸಲು ಸಾಧ್ಯವಾಗುತ್ತಿಲ್ಲ.



ಸುತ್ತಲಿನ ತೋಟದಲ್ಲಿ ಓಡಾಡಿಕೊಂಡಿದ್ದ ತಾಯಿ ಆನೆಯು ಬೆಳೆ ಉಳಿಸಿಕೊಳ್ಳಲು ರೈತರು ಕ್ರಿಮಿನಾಶಕ ಔಷಧಿ ಸಿಂಪಡಿಸಿದ್ದರು. ಅದನ್ನು ಸೇವಿಸಿದ್ದರಿಂದ ಅನಾರೋಗ್ಯಕ್ಕೀಡಾಗಿತ್ತು. ಈ ಕಾರಣದಿಂದ ಅವಧಿ ಪೂರ್ವ ಹೆರಿಗೆ ಆಗಿ ಮರಿ ಆನೆ ಮೃತಪಟ್ಟಿದೆ ಎಂದು ತಿಳಿದುಬಂದಿದೆ. ಮರಣೋತ್ತರ ಪರೀಕ್ಷೆ ಬಳಿಕವಷ್ಟೇ ಸತ್ಯ ತಿಳಿದುಬರಲಿದೆ. ಪ್ರತಿಕ್ರಿಯೆಗೆ ಉಪಅರಣ್ಯ ಸಂರಕ್ಷಣಾಧಿಕಾರಿ ಅವರನ್ನು ಸಂಪರ್ಕಿಸಲಾಯಿತಾದರೂ ಅವರು ಕರೆ ಸ್ವೀಕರಿಸಲಿಲ್ಲ.

# ವಿದ್ಯಾಸೌಧ ಶಾಲೆಗೆ ಹುಸಿ ಬಾಂಬ್ ಕರೆ: ನಿಗಾ



ಹಾಸನ: ನಗರದ ವಿದ್ಯಾ ಸಂಸ್ಥೆಯ ಮೂರು ಶಿಕ್ಷಣ ಸಂಸ್ಥೆಗಳಿಗೆ ಬಾಂಬ್ ಹಾಕುವ ಬೆದರಿಕೆ ಕರೆ ಬಂದಿದೆ. ಮೂರು ಶಾಲೆಗಳಿಗೆ ಬಾಂಬ್ ಹಾಕಿ ಸ್ಫೋಟಿಸುವುದಾಗಿ ಬೆಂಗಳೂರಿನ ಕಚೇರಿಗೆ ಅಪರಿಚಿತ ವ್ಯಕ್ತಿ ಇ-ಮೇಲ್ ಮಾಡಿದ್ದಾನೆ. divijpprabhakaralakshmi gmail.com ಇ-ಮೇಲ್ ನಿಂದ ಸಂದೇಶ ಬಂದಿದೆ.

ಮಂಜೇಗೌಡ ಎಂಬುವವರು ಮೂರು ಶಾಲೆಗಳ ಪ್ರಾಂಚೈಸಿ ಪಡೆದಿದ್ದು, ಹಾಸನದ ವಿಜಯನಗರ, ಇಂಡಸ್ಟ್ರಿಯಲ್ ಏರಿಯಾ ಮತ್ತು ಕೆ.ಆರ್.ಪುರಂನಲ್ಲಿರುವ ವಿದ್ಯಾಸೌಧ ಕಾಲೇಜು, ಪಬ್ಲಿಕ್ ಶಾಲೆ ಹಾಗೂ ಕಿಡ್ಸ್ ಸೇರಿ ಮೂರು ಶಾಲೆ ನಡೆಸುತ್ತಿದ್ದಾರೆ. ಇದೇ ಸಂಸ್ಥೆಗೆ ಸೇರಿದ ಕಾಲೇಜು ಹೈದರಾಬಾದ್‌ನಲ್ಲಿದ್ದು, ಅಲ್ಲಿ ನಡೆದಿರುವ ಅಪರಾಧ ಪ್ರಕರಣವೊಂದರ ತನಿಖೆ ಸರಿಯಾಗಿ ನಡೆಯುತ್ತಿಲ್ಲ. ಅನ್ಯಾಯಕ್ಕೊಳಗಾದವರಿಗೆ ನ್ಯಾಯ ಸಿಗುತ್ತಿಲ್ಲ ಎಂಬ ಕಾರಣಕ್ಕೆ ಮೇಲ್ ಮಾಡಲಾಗಿದೆ ಎನ್ನಲಾಗಿದೆ.

ನಗರ ಹಾಗೂ ಗ್ರಾಮಾಂತರ ಪೊಲೀಸ್ ಠಾಣೆಗೆ ಶಾಲೆಯ ಪ್ರಾಂಶುಪಾಲರು ದೂರು ನೀಡಿದ್ದು, ತಡರಾತ್ರಿ ಬಾಂಬ್ ನಿಷ್ಕ್ರಿಯ ದಳ, ಡಾಗ್ ಸ್ಕ್ವಾಡ್ ಹಾಗೂ ಪೊಲೀಸರು ಮೂರು ಕಡೆ ಶಾಲೆಗಳಿಗೆ ಭೇಟಿ ನೀಡಿ ತಪಾಸಣೆ ನಡೆಸಿದ್ದು, ಯಾವುದೇ ಆತಂಕ ಪಡುವುದು ಬೇಡ ಎಂದು ತಿಳಿಸಿದ್ದಾರೆ.

# ಪೌತಿ ಖಾತೆ ಆಂದೋಲನ ಪ್ರಯೋಜನ ಪಡೆಯಿರಿ

## 4 ಸಾವಿರ ಬಾಕಿ ಅರ್ಜಿ ಇತ್ಯರ್ಥಕ್ಕೆ ಕ್ರಮ | ಶಾಸಕ ಹೆಚ್.ಪಿ. ಸ್ವರೂಪ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅಧಿಕಾರಿಗಳೇ ತಮ್ಮ ಬಳಿ ಬಂದು ಖಾತೆ ಮಾಡಿಕೊಡುತ್ತಿದ್ದು ಸಾರ್ವಜನಿಕರು ಪೌತಿ ಖಾತೆಯ ಪ್ರಯೋಜನ ಪಡೆಯಬೇಕು ಎಂದು ಶಾಸಕ ಹೆಚ್.ಪಿ. ಸ್ವರೂಪ್ ಹೇಳಿದರು.

ಸಾಲಗಾಮೆ ಗ್ರಾಮ ಪಂಚಾಯಿತಿ ಆವರಣದಲ್ಲಿ ಸೋಮವಾರ ಆಯೋಜಿಸಿದ್ದ ಹೋಬಳಿಯ ಪೌತಿ ಖಾತಾ ಆಂದೋಲನಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ಕಂದಾಯ ಇಲಾಖೆಯಲ್ಲಿ ಬಹಳಷ್ಟು ಸುಧಾರಣೆಗಳನ್ನ ಮಾಡಿದ್ದಾರೆ. ಪೌತಿ ಖಾತೆ ಯಾರಿಗೆ ತಲುಪಬೇಕೋ ಅವರಿಗೆ ತಲುಪಿಸುವ ಕೆಲಸ ಸರ್ಕಾರ ಮಾಡುತ್ತಿದೆ ಎಂದರು.

ತಾಲ್ಲೂಕಿನಲ್ಲಿ ಅಧಿಕಾರಿಗಳು ನಿಮ್ಮ ಅರ್ಜಿ ತೆಗೆದುಕೊಂಡು ಶೀಘ್ರದಲ್ಲೇ ತಮ್ಮ ಹೆಸರಿಗೆ ಮಾಡಿಕೊಡುವ ಪ್ರಯತ್ನ ಮಾಡುತ್ತಿದ್ದಾರೆ. ಹಲವಾರು ರೈತರು ದುರಸ್ತಿಯ ಬಗ್ಗೆ ಕೇಳುತ್ತಿದ್ದರು. ಈಗಾಗಲೇ ಹಾಸನ ತಾಲ್ಲೂಕಿನಲ್ಲಿ ತಹಶೀಲ್ದಾರ್ ಕಚೇರಿಯಿಂದ 6500 ಅರ್ಜಿಗಳು ಎಡಿಎಲ್ಆರ್ ಕಚೇರಿಗೆ ತಲುಪಿವೆ. 2500 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ಇನ್ನುಳಿದ 4000 ಅರ್ಜಿಗಳು ಶೀಘ್ರದಲ್ಲೇ ವಿಲೇ ಆಗುತ್ತವೆ. ತಮ್ಮಲ್ಲಿ ಎಲ್ಲಾ ದಾಖಲಾತಿಗಳು ಸರಿಯಾಗಿದ್ದರೆ ವೇಗವಾಗಿ ಕೆಲಸಗಳು ಆಗುತ್ತವೆ ಇಲ್ಲವೇ ಜಿಲ್ಲಾಧಿಕಾರಿಗಳ ಬಳಿ ಹೋಗಿ ತನಿಖೆಯಾದ ನಂತರ ತಮ್ಮ ಹೆಸರಿಗೆ ಖಾತೆಗಳು ಆಗುತ್ತವೆ ಎಂದು ಹೇಳಿದರು.



ತಹಶೀಲ್ದಾರ್ ಅವರು ಕೂಡ ಕ್ರಿಯಾಶೀಲರಾಗಿ ಪಂಚಾಯಿತಿ, ಹೋಬಳಿ ಮಟ್ಟಕ್ಕೆ ಬಂದು ಕೆಲಸ ಮಾಡಿಕೊಡುತ್ತಿದ್ದಾರೆ. ಹಾಗಾಗಿ ಅವರಿಗೆ ಹೆಚ್ಚಿನ ಒತ್ತಡ ನೀಡದೇ ಖಾತೆ ಮಾಡಿಸಿಕೊಳ್ಳಿ ಎಂದರಲ್ಲದೇ ಮೆಕ್ಕೆಜೋಳಕ್ಕೆ ಇತ್ತೀಚೆಗೆ ರೋಗ ಬರುತ್ತಿದೆ. ಅದಕ್ಕೆ ಸಂಬಂಧಪಟ್ಟಂತೆ ಕೃಷಿ ಇಲಾಖೆ ನೀಡುವಂತಹ ಸಲಹೆ ಸೂಚನೆಗಳನ್ನು ತಮ್ಮ ಬೆಳೆಯಲ್ಲಿ ಅಳವಡಿಸಿಕೊಳ್ಳಿ ಎಂದು ತಿಳಿಸಲಾಯಿತು.

ತಹಶೀಲ್ದಾರ್ ಗೀತಾ ಮಾತನಾಡಿ, ಸರ್ಕಾರದ ಸೂಚನೆಯಂತೆ ಎಲ್ಲಾ ಹೋಬಳಿಗಳಲ್ಲಿಯೂ ಪೌತಿ ಖಾತೆ ವಿತರಣೆ ಮಾಡುತ್ತಿದ್ದೇವೆ. ಇದು 4ನೇ ಹೋಬಳಿಯಾಗಿದೆ. ಈಗಾಗಲೇ 3500 ಕಡತಗಳ ಖಾತೆ ಮಾಡಿದ್ದೇವೆ. ಇನ್ನು 50,000 ಪೌತಿ ಖಾತೆ ಬಾಕಿ ಇವೆ. ರೈತರು ತಮ್ಮ ಹೆಸರಿಗೆ ಖಾತೆ ಮಾಡಿಸಿಕೊಳ್ಳಲು ಇದೊಂದು ಸುಲಭದ ರೀತಿಯಾಗಿದೆ ಇಂದು ಕೂಡಾ ಪೌತಿ ಖಾತೆಗೆ ಅರ್ಜಿ ಸಲ್ಲಿಸಬಹುದು ಎಂದರು.

### ಬೆಳೆ ಹಾನಿ ಪ್ರದೇಶಕ್ಕೆ ಭೇಟಿ



ಹಾಸನ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಾಲಗಾಮೆ ಹೋಬಳಿ ವ್ಯಾಪ್ತಿಯಲ್ಲಿ ಮುಸುಕಿನ ಜೋಳ ಹಾನಿಯಾಗಿರುವ ಕೃಷಿ ಪ್ರದೇಶಗಳಿಗೆ ಶಾಸಕ ಹೆಚ್.ಪಿ. ಸ್ವರೂಪ್ ಭೇಟಿ ನೀಡಿ ಪರಿಶೀಲಿಸಿದರು.

ತಾಲೂಕಿನಲ್ಲಿ ಒಟ್ಟು 12,200 ಹೆಕ್ಟೇರ್ ಪ್ರದೇಶದಲ್ಲಿ ಮುಸುಕಿನ ಜೋಳ ಬಿತ್ತನೆಯಾಗಿದ್ದು, ಸಾಲಗಾಮೆ - 425 ಹೆಕ್ಟೇರ್ ಹಾಗೂ ಕಸಬಾ - 1500 ಹೆಕ್ಟೇರ್ ಸೇರಿ ಒಟ್ಟು 1925 ಹೆಕ್ಟೇರ್ ಪ್ರದೇಶಕ್ಕೆ ರೋಗ ಹರಡಿರುವ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಬಳಿಕ ಬೆಳೆ ಹಾನಿ ಬಗ್ಗೆ ಸರ್ಕಾರದ ಗಮನಕ್ಕೆ ತಂದು ಪರಿಹಾರ ಕೊಡಿಸುವ ಬಗ್ಗೆ ಚರ್ಚೆ ನಡೆಸುವುದಾಗಿ ಭರವಸೆ ನೀಡಿದ ಅವರು, ಕ್ಷತ್ರದ ವ್ಯಾಪ್ತಿಯಲ್ಲಿನ ಬೆಳೆ ಹಾನಿ ಬಗ್ಗೆ ಮಾಹಿತಿ ಪಡೆದರು. ಈ ವರೆಗೆ ಸುತ್ತಮುತ್ತಲ ಗ್ರಾಮದ ರೈತರು ಜೋಳ ಕಳೆದುಕೊಂಡ ಬಗ್ಗೆ ಅಳಲು ತೋಡಿಕೊಂಡರು.

# ಆ. 21ರಂದು ಅಮಲು ಮುಕ್ತ ಭಾರತ ಸಮಾವೇಶ


**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಅಮಲು ಮುಕ್ತ ಭಾರತ ಆಂದೋಲನದ ಒಂದು ವರ್ಷದ ಕಾರ್ಯಕ್ರಮವನ್ನು ಆ. 21ರಂದು ಪಟ್ಟಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಮಾಜಿ ಶಾಸಕ ಹೆಚ್.ಎಂ. ವಿಶ್ವನಾಥ್ ಹೇಳಿದರು.

ಪಟ್ಟಣದ ಒಕ್ಕಲಿಗರ ಭವನದಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, 2024ರ ಆ. 21ರಂದು ಅಮಲು ಮುಕ್ತ ಭಾರತದ ಆಂದೋಲನಕ್ಕೆ ಚಾಲನೆ ನೀಡಲಾಗಿತ್ತು. ಕಳೆದ ಒಂದು ವರ್ಷದಲ್ಲಿ ಜನಜಾಗೃತಿ ಮೂಡಿಸುವಲ್ಲಿ ಆಂದೋಲನ ಯಶಸ್ವಿಯಾಗಿದೆ ಎಂದರು.

ರಾಷ್ಟ್ರೀಯ ಮಟ್ಟದ ನಾಯಕರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲಾಗುವುದು. ಜನಜಾಗೃತಿ ಮೂಡಿಸುವ ಕಾರ್ಯಕ್ಕೆ ಮತ್ತಷ್ಟು ಒತ್ತುವರಿ ನೀಡಲಾಗುತ್ತದೆ. ಅಮಲು ದೇಶದ ಯುವ ಸಮೂಹವನ್ನು ಗಂಭೀರವಾಗಿ ಕಾಡುತ್ತಿದೆ. ಅನೇಕ ಕುಟುಂಬಗಳು ಈ ಪೀಡೆಯಿಂದ ತತ್ತರಿಸಿವೆ. ಅತ್ಯಂತ ಚಾಣಾಕ್ಷತನದಿಂದ ಹಾಗೂ ಆಧುನಿಕ ತಂತ್ರಜ್ಞಾನ ಬಳಸಿಕೊಂಡು ನಡೆಯುತ್ತಿರುವ ಈ ದಂಧೆ ನಿಯಂತ್ರಿಸುವುದು ವ್ಯವಸ್ಥೆಗೆ ದೊಡ್ಡ ಸವಾಲು. ಈ ನಿಟ್ಟಿನಲ್ಲಿ ಸಾರ್ವಜನಿಕರ ಪಾತ್ರ ಬಹುಮುಖ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಅಮಲು ಮುಕ್ತ ಸಮಾಜ ಆಂದೋಲನದ ಸಂಚಾಲಕ ಮಲ್ನಾಡ್ ಮೆಹಬೂಬ್ ಮಾತನಾಡಿ, ಆ. 21ರಂದು ನಡೆಯಲಿರುವ ಸಮಾವೇಶಕ್ಕೆ ಎಲ್ಲಾ ಸಂಘಟನೆಗಳೊಂದಿಗೆ ಚರ್ಚೆ ನಡೆಸಲಾಗುವುದು. ವಿವಿಧ ರೀತಿಯ ಕಾರ್ಯಕ್ರಮ ರೂಪಿಸಲಾಗುವುದು. ಜನಜಾಗೃತಿ, ವಿದ್ಯಾರ್ಥಿಗಳೊಂದಿಗೆ ಸಂವಾದ, ವಿವಿಧ ಸ್ಪರ್ಧೆ ಆಯೋಜಿಸಲಾಗುತ್ತದೆ ಎಂದು ಹೇಳಿದರು.




ಕಳೆದ ಒಂದು ವರ್ಷದಲ್ಲಿ ಸಾಕಷ್ಟು ಜನಜಾಗೃತಿ ಮೂಡಿಸಲಾಗಿದ್ದು, ಪೊಲೀಸ್ ಇಲಾಖೆಯ ಸಹಕಾರ ಗಮನಾರ್ಹವಾಗಿದೆ. ಕಲೆ, ಸಾಹಿತ್ಯ, ಸಾಂಸ್ಕೃತಿಕ ಹಾಗು ಮನೋರಂಜನಾ ಕಾರ್ಯಕ್ರಮಗಳ ಮೂಲಕ ಜನಸಾಮಾನ್ಯರಲ್ಲಿ ಅರಿವು ಮೂಡಿಸಲು ಪ್ರಚಾರ ನಡೆಯಲಿದೆ ಎಂದರು.

ಪತ್ರಕರ್ತರ ಸಂಘದ ಅಧ್ಯಕ್ಷ ಜೈ ಭೀಮ್ ಮಂಜುನಾಥ್, ಲಯನ್ಸ್ ಸಂಸ್ಥೆಯ ಪ್ರಸನ್ ಕುಮಾರ್, ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ರಮೇಶ್, ಪ್ರಧಾನ ಕಾರ್ಯದರ್ಶಿ ಅಭಿ, ಪುರಸಭೆ ನಾಮನಿರ್ದೇಶಿತ ಸದಸ್ಯೆ ಬಿಲ್ಕಿಸ್ ರಾಣಿ, ಜಿಲ್ಲಾ ಕಾಂಗ್ರೆಸ್ ಅಲ್ಪಸಂಖ್ಯಾತರ ವಿಭಾಗದ ಉಪಾಧ್ಯಕ್ಷೆ ಸಾಯಿರ್ ಬಾನು, ನಾಗರಿಕ ಸಂರಕ್ಷಣಾ ಸಮಿತಿ ಅಧ್ಯಕ್ಷ ರವಿಕುಮಾರ್ ಹಾಗೂ ಇತರರಿದ್ದರು.

# ಮಕ್ಕಳಿಗೆ ಸಂಸ್ಕಾರ ಕಲಿಸುವುದು ಅಗತ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಮಕ್ಕಳಿಗೆ ಶಿಕ್ಷಣ ಕೊಡಿಸುವುದರ ಜೊತೆಗೆ ಸಂಸ್ಕಾರವನ್ನೂ ಕಲಿಸುವ ಅಗತ್ಯವಿದೆ ಎಂದುಯಸಳೂರು ತೆಂಕಲಗೂಡು ಬೃಹನ್ಮಠದ ಶ್ರೀ ಚನ್ನಸಿದ್ದೇಶ್ವರ ಸ್ವಾಮೀಜಿ ಹೇಳಿದರು. ತಾಲ್ಲೂಕಿನ ಮಾದೀಹಳ್ಳಿ ಹೋಬಳಿ ಅಂದಲೆ ಗ್ರಾಮದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಧಾರ್ಮಿಕ ಸಮಾರಂಭದಲ್ಲಿ ಆರ್ಶಿವಚನ ನೀಡಿದ ಅವರು, ಶಿಕ್ಷಣ ಕ್ಷೇತ್ರವು ದಿನದಿಂದ ದಿನಕ್ಕೆ ಬದಲಾವಣೆಯಾಗುತ್ತಿದೆ. ಇದು ಸ್ಪರ್ಧಾ ಜಗತ್ತು, ಅಂಕ



ಗಳಿಸುವ ತವಕದಲ್ಲಿ ಸಂಸ್ಕಾರ, ಸಂಸ್ಕೃತಿ, ಮಾನವೀಯ ಮೌಲ್ಯಗಳನ್ನು ವಿದ್ಯಾರ್ಥಿಗಳು ಮರೆಯಬಾರದು ಎಂದರು.ಸಮಾಜದಲ್ಲಿ ನಡೆಯುತ್ತಿರುವ ಕಾನೂನು ಬಾಹಿರ ಕೃತ್ಯಗಳು ವಿದ್ಯಾವಂತರಿಂದಲೇ ಅಧಿಕ ಪ್ರಮಾಣದಲ್ಲಿ ಆಗುತ್ತಿವೆ. ಕೇವಲ ಪದವಿ ಪಡೆದರೆ ಯಾವ ಪ್ರಯೋಜನವಿಲ್ಲ. ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು. ಯುವಕರು ದುಶ್ಚಟಕ್ಕೆ ದಾಸರಾಗುವ ಮೂಲಕ ಸಮಾಜಕ್ಕೆ ಹೊರೆಯಾಗುತ್ತಿದ್ದಾರೆ ಎಂದರು.

ಜಿಲ್ಲಾ ಬಿಜೆಪಿ ಮುಖಂಡ ಕೊರಟಿಕೆರೆ ಪ್ರಕಾಶ್, ರೇಣುಕುಮಾರ್, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಗೌರವಾಧ್ಯಕ್ಷ ಸಿ.ಎಂ. ನಿಗರಾಜ್, ತಾಲ್ಲೂಕು ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಎ.ಎಸ್. ಬಸವರಾಜು, ಕೃಷಿಕ ಸಮಾಜದ ಬಿ.ಎಂ. ದೊಡ್ಡವೀರೇಗೌಡ, ಎಪಿಎಂಸಿ ಮಾಜಿ ಅಧ್ಯಕ್ಷ ವಿಷ್ಣುಕುಮಾರ್, ಅರುಣ್ ಕುಮಾರ್, ಮದನ್ ಬಳ್ಳೂರು, ಹಳೇಬೀಡು ಚೇತನ್, ಬಿ.ಎಂ. ರವಿಕುಮಾರ್, ಪುಟ್ಟಸ್ವಾಮಿ, ಚಿಕ್ಕಬ್ಯಾಡಿಗೆರೆ ಮಂಜುನಾಥ್, ಸುನೀಲ್, ಭುವನೇಶ್, ಕೊರಟಿಕೆರೆ ರಾಜಣ್ಣ, ಹೆಬ್ಬಾಳು ಹಾಲಪ್ಪ ಇತರರಿದ್ದರು.

# ವಿದ್ಯುತ್ ತಂತಿ ಸ್ಪರ್ಶ: ತಾಯಿ-ಮರಿ ಕಾಡಾನೆ ದುರ್ಮರಣ

## ಸೆಸ್ಕಾಂ ನಿರ್ಲಕ್ಷ್ಯ ಆರೋಪ | ಮಳೆ-ಗಾಳಿಗೆ ಅನಾಹುತ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ನೆಲದ ಮೇಲೆ ತುಂಡಾಗಿ ಬಿದ್ದಿದ್ದ ವಿದ್ಯುತ್ ತಂತಿ ತುಳಿದು ಕಾಡಾನೆ ತನ್ನ ಮರಿಯೊಂದಿಗೆ ಸಾವಿಗೀಡಾದ ದಾರುಣ ಘಟನೆ ತಾಲ್ಲೂಕಿನ ಉದೇವಾರ ಗ್ರಾಮ ಸಮೀಪದ ಎಬಿಸಿ ಕಾಫಿ ಎಸ್ಟೇಟ್‌ನಲ್ಲಿ ನಡೆದಿದೆ.

ತಾಲ್ಲೂಕಿನಲ್ಲಿ ಮೋಡ ಮುಸುಕಿದ ವಾತಾವರಣದೊಂದಿಗೆ ಸತತವಾಗಿ ಮಳೆ ಸುರಿಯುತ್ತಿದೆ. ಜೋರು ಗಾಳಿಗೆ ಎಬಿಸಿ ಕಾಫಿ ಎಸ್ಟೇಟ್‌ನಲ್ಲಿ ಮರದ ಕೊಂಬೆಯೊಂದು ವಿದ್ಯುತ್ ತಂತಿಯ ಮೇಲೆ ಬಿದ್ದ ಪರಿಣಾಮ ತಂತಿ ತುಂಡಾಗಿ ನೆಲಕ್ಕೆ ಬಿದ್ದಿದೆ. ಈ ವಿದ್ಯುತ್ ತಂತಿಯನ್ನು ತುಳಿದ ಕಾರಣದಿಂದ ಆಹಾರಕ್ಕಾಗಿ ತೋಟದಲ್ಲಿ ಸಂಚರಿಸುತ್ತಿದ್ದ ತಾಯಿ-ಮರಿ ಕಾಡಾನೆಗಳು ಸ್ಥಳದಲ್ಲೇ ಮೃತಪಟ್ಟಿವೆ.



ಪರಿಸರ ಹೋರಾಟಗಾರ ಹುರುಡಿ ವಿಕ್ರಮ್ ಮಾತನಾಡಿ, ಸೆಸ್ಕಾಂ ಅಧಿಕಾರಿಗಳ ನಿರ್ಲಕ್ಷ್ಯದಿಂದ ಕಾಡಾನೆಗಳು ಸಾವನ್ನಪ್ಪಿವೆ. ಆನೆಗಳು ಸಂಚರಿಸುವ ಪ್ರದೇಶಗಳಲ್ಲಿ ವಿದ್ಯುತ್ ಕಂಬಗಳನ್ನು ಎತ್ತರಕ್ಕೆ ಏರಿಸಬೇಕು. ಕಂಬಗಳ ಸುತ್ತಲಿನ ಮರದ ಕೊಂಬೆಗಳನ್ನು ಕಡಿಯಬೇಕು ಎಂಬ ಹೈಕೋರ್ಟ್ ನಿಯಮವಿದ್ದರೂ ಸೆಸ್ಕಾಂ ಹಾಗು ಅರಣ್ಯ ಇಲಾಖೆ ನಿರ್ಲಕ್ಷ್ಯ ವಹಿಸಿದೆ. ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಎರಡು ಅಮಾಯಕ ಕಾಡಾನೆಗಳು ಬಲಿಯಾಗಿವೆ. ಈ ಘಟನೆಗೆ ಕಾರಣವಾದ ವಿದ್ಯುತ್ ಇಲಾಖೆಯ ವಿರುದ್ಧ ಅರಣ್ಯ ಇಲಾಖೆ ಪ್ರಕರಣ ದಾಖಲಿಸಬೇಕು ಎಂದು ಒತ್ತಾಯಿಸಿದರು.

ಅರಣ್ಯ ಅಧಿಕಾರಿ ಮೋಹನ್ ಮಾತನಾಡಿ, ಕಳೆದ ಎರಡು ದಿನಗಳಿಂದ ಈ ಭಾಗದಲ್ಲಿ ಎಡೆಬಿಡದೆ ಸುರಿಯುತ್ತಿರುವ ಮಳೆಯಿಂದಾಗಿ ಮರದ ಕೊಂಬೆಯೊಂದು ವಿದ್ಯುತ್ ಕಂಬದ ಮೇಲೆ ಬಿದ್ದು, ತಂತಿಗಳು ತುಂಡರಿಸಿ ನೆಲಕ್ಕೆ ಬಿದ್ದಿವೆ. ಆಹಾರ ಅರಸಿ ಸಂಚರಿಸುತ್ತಿದ್ದ ತಾಯಿ-ಮರಿ ಕಾಡಾನೆಗಳು ತಂತಿ ತುಳಿದು ಮೃತಪಟ್ಟಿವೆ. ಈ ರೀತಿಯ ಘಟನೆಗಳು ಮರುಕಳಿಸದಂತೆ ಸೆಸ್ಕಾಂ ಇಲಾಖೆಗೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಮನವಿ ಮಾಡಲಾಗಿದೆ. ಪಶು ವೈದ್ಯಾಧಿಕಾರಿಗಳ ಸಮ್ಮುಖದಲ್ಲಿ ಮೃತ ಆನೆಗಳ ಮರಣೋತ್ತರ ಪರೀಕ್ಷೆ ನಡೆಸಿ, ಅಂತ್ಯಕ್ರಿಯೆ ನೆರವೇರಿಸಲಾಗಿದೆ ಎಂದು ಹೇಳಿದರು. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಕಾರ್ಮಿಕರಿಂದ ತಿಳಿದುಬಂದ ಮಾಹಿತಿ

ಎಬಿಸಿ ಎಸ್ಟೇಟ್‌ನ ಕಾರ್ಮಿಕರಾದ ತಿರುಮಲೈ ಹಾಗೂ ನಾಗರಾಜು ಪದೇ ಪದೇ ವಿದ್ಯುತ್ ಸಂಪರ್ಕದಲ್ಲಿ ವ್ಯತ್ಯಯವಾಗುತ್ತಿದ್ದರಿಂದ ತಂತಿ ಮೇಲೆ ಏನಾದರೂ ಬಿದ್ದಿರಬಹುದೆಂದು ಭಾನುವಾರ ಬೆಳಿಗ್ಗೆ 10 ಗಂಟೆಗೆ ತೋಟದೊಳಗೆ ತೆರಳಿದ್ದಾರೆ. ವಿದ್ಯುತ್ ತಂತಿ ಬಿದ್ದ ಜಾಗದಲ್ಲಿ ಸುಟ್ಟ ವಾಸನೆ ಹರಡಿದ್ದರಿಂದ ಅದೇ ಮಾರ್ಗದಲ್ಲಿ ಸಾಗಿದಾಗ ಆನೆಗಳು ಸತ್ತುಬಿದ್ದಿರುವುದು ಗೊತ್ತಾಗಿದೆ. ಆ ಬಳಿಕ ಅರಣ್ಯ ಇಲಾಖೆ ಸಿಬ್ಬಂದಿಗೆ ಮಾಹಿತಿ ನೀಡಿದ್ದಾರೆ.

ಕಾರ್ಮಿಕ ತಿರುಮಲೈ ಮಾತನಾಡಿ, ಶನಿವಾರ ಮಧ್ಯಾಹ್ನ 3 ಗಂಟೆ ಸಮಯದಲ್ಲಿ ಮರಿಯಾನೆ ಜೊತೆಗಿದ್ದ ಕಾಡಾನೆ ಘೀಳಿಡುತ್ತಿದ್ದ ಶಬ್ದ ಕೇಳಿಸಿತ್ತು. ಆದರೆ ಬೆಳಿಗ್ಗೆ 10 ಗಂಟೆ ಸುಮಾರಿಗೆ ಆನೆಗಳ ಸಾವನ್ನು ಕಣ್ಣಾರೆ ಕಂಡು ದುಃಖವಾಯಿತು. ಆನೆಬಳಿ ಬಿದ್ದಿದ್ದ ವಿದ್ಯುತ್ ತಂತಿಯಲ್ಲಿ ಇನ್ನೂ ವಿದ್ಯುತ್ ಪ್ರವಹಿಸುತ್ತಿದ್ದರಿಂದ ನಾವೇ ಸಂಪರ್ಕ ಕಡಿತಗೊಳಿಸಿದೆವು ಎಂದರು.

# ನಾಮಕರಣ ಸಮಾರಂಭ ಅತಿಥಿಗಳಿಗೆ ಸಸಿ ವಿತರಣೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹೊಳೆನರಸೀಪುರ: ನಾಮಕರಣ ಸಮಾರಂಭಕ್ಕೆ ಆಗಮಿಸಿದ ಅತಿಥಿಗಳಿಗೆ ತಾಂಬೂಲ ರೂಪದಲ್ಲಿ ಸಸಿಗಳನ್ನು ನೀಡುವ ಮೂಲಕ ಹಾಸನದ ರಾಕೇಶ್ ಹಾಗೂ ಸುಷ್ಮಾ ದಂಪತಿ ಪರಿಸರದ ಮಹತ್ವ ಸಾರಿದರು.

ಹಾಸನದ ತಣ್ಣೀರುಹಳ್ಳದ ಕಟ್ಟೆಮನೆ ಅಮ್ಮನ ಮಡಿಲು ಸಂಘಟನೆಯ ಭಾರತಿ ಗುರುಮೂರ್ತಿ ಅವರ ಪುತ್ರ ರಾಕೇಶ್ ಹಾಗೂ ಸುಷ್ಮಾ ದಂಪತಿಯ ಮಗ ಏಕಾಂಶ್ ನಾಮಕರಣ ಸಮಾರಂಭ ಪಟ್ಟಣದ ಶ್ರೀರಾಮ ಮಂದಿರದಲ್ಲಿ ಭಾನುವಾರ ನೆರವೇರಿತು.

ಕಾರ್ಯಕ್ರಮಕ್ಕೆ ಆಗಮಿಸುವ ಅತಿಥಿಗಳಿಗೆ ಭೋಜನದ ನಂತರ ತಾಂಬೂಲವಾಗಿ ಹಣ್ಣು, ನೆನಪಿನ ಕಾಣಿಕೆಗಳನ್ನು ಕೊಡುವುದು ವಾಡಿಕೆ. ಆದರೆ ಪರಿಸರದ ಅರಿವು ಮೂಡಿಸುವ ಉದ್ದೇಶದಿಂದ ರಾಕೇಶ್ ಅವರು ಎಲ್ಲರಿಗೂ ವಿವಿಧ ತಳಿಯ ಸಸಿ ವಿತರಿಸಿ ಮಾದರಿಯಾದರು.

ಅಧ್ಯಯನ ಕಾಲೇಜಿನ ಹೆಚ್.ಜಿ. ಮೋಹನ್ ಕುಮಾರ್, ಅಖಿಲ ಭಾರತೀಯ ಸಾಹಿತ್ಯ ಪರಿಷತ್ ವಿಭಾಗ ಸಹ ಸಂಯೋಜಕ್ ಕಟ್ಟೆಮನೆ ನಾಗೇಂದ್ರ, ನಿವೃತ್ತ ಬ್ಯಾಂಕ್ ಅಧಿಕಾರಿ ನಾರಾಯಣ್, ಗಜಾನನ, ರವಿ ಕುಮಾರ್, ವರುಣ್, ಸಂಜಯ್, ವಾಣಿ ಚಂದನ್ ಮತ್ತು ಇತರರಿದ್ದರು.

# ಪೋಷಕರು ಖಾಸಗಿ ಶಾಲೆ ವ್ಯಾಮೋಹ ಬಿಡಬೇಕು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಸರ್ಕಾರಿ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುತ್ತಿದ್ದು ಪೋಷಕರು ಖಾಸಗಿ ಶಾಲೆಗಳ ವ್ಯಾಮೋಹ ಬಿಟ್ಟು ಸರ್ಕಾರಿ ಶಾಲೆಗೆ ಮಕ್ಕಳನ್ನು ಸೇರಿಸಬೇಕು ಎಂದು ವಂದೇ ಮಾತರಂ ಸೇವಾ ಟ್ರಸ್ಟ್ ಸಂಸ್ಥಾಪಕ ನಾಗಣ್ಣ ತಿಳಿಸಿದರು.



ಪಟ್ಟಣದ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಹಿಂಭಾಗದ ಪಿಎಂಶ್ರೀ ಸರ್ಕಾರಿ ಶಾಲಾ ಆವರಣದಲ್ಲಿ ವಂದೇ ಮಾತರಂ ಸೇವಾ ಟ್ರಸ್ಟ್ ಹಾಗೂ ಮಾತೃಭೂಮಿ ವೃದ್ಧಾಶ್ರಮದಿಂದ ಹಮ್ಮಿಕೊಂಡಿದ್ದ ಸರ್ಕಾರಿ ಶಾಲೆ ಉಳಿಸಿ ಅಭಿಯಾನ ಸಮಾರೋಪ ಸಮಾರಂಭದಲ್ಲಿ ಮಾತನಾಡಿ, ಸರ್ಕಾರಿ ಶಿಕ್ಷಣ ಇಲಾಖೆಗೆ ಕೋಟ್ಯಂತರ ರೂ. ವೆಚ್ಚ ಮಾಡುತ್ತಿದೆ. ಆದರೂ ಪೋಷಕರು ತಮ್ಮ ಮಕ್ಕಳನ್ನು ಖಾಸಗಿ ಶಾಲೆಗೆ ದಾಖಲು ಮಾಡುತ್ತಿದ್ದಾರೆ ಎಂದರು.

ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲು ಮಾಡುವಂತೆ ಒಂದು ತಿಂಗಳಿನಿಂದ ಶಾಂತಿಗ್ರಾಮ ಹೋಬಳಿ, ನುಗ್ಗೇಹಳ್ಳಿ, ದಂಡಿಗನಹಳ್ಳಿ, ಬಾಗೂರು, ಶ್ರವಣಬೆಳಗೊಳ, ಹಿರೀಸಾವೆ, ಮಂಡ್ಯ ಜಿಲ್ಲೆಯ ನಾಗಮಂಗಲ, ಕೆ.ಆರ್.ಪೇಟೆ, ಪಾಂಡವಪುರ ತಾಲ್ಲೂಕಿನ ವಿವಿಧ ಹೋಬಳಿ ಕೇಂದ್ರಗಳಲ್ಲಿ ನಡೆಯುವ ಸಂತೆ, ಜಾತ್ರೆ, ರಥೋತ್ಸವದಲ್ಲಿ ಜಾಗೃತಿ ಮೂಡಿಸಲಾಗಿದೆ ಎಂದು ತಿಳಿಸಿದರು.

ಸರ್ಕಾರಿ ಶಾಲೆಯಲ್ಲಿ ಕರ್ತವ್ಯ ನಿರ್ವಹಿಸುವ ಶಿಕ್ಷಕರು ತಮ್ಮ ಮಕ್ಕಳನ್ನು ಮೊದಲು ಖಾಸಗಿ ಶಾಲೆಗೆ ದಾಖಲು ಮಾಡುವುದು ಬಿಡಬೇಕು. ಈ ಬಗ್ಗೆ ಸರ್ಕಾರಿ ಕಾಯ್ದೆ ತರುವ ಮೂಲಕ ಸರ್ಕಾರಿ ಶಾಲೆ ಉಳಿಸಲು ಸರ್ಕಾರ ಮುಂದಾಗಬೇಕಾಗಿದೆ. ಸರ್ಕಾರದಿಂದ ಸಾವಿರಾರು ರೂ. ವೇತನ ಪಡೆಯುವ ಶಿಕ್ಷಕರು, ತಮ್ಮ ಮಕ್ಕಳನ್ನು ಖಾಸಗಿ ಶಾಲೆಗೆ ಸೇರಿಸುವ ಮೂಲಕ ಸರ್ಕಾರಿ ಶಾಲೆಗಳಿಗೆ ಅಪಮಾನ ಮಾಡುತ್ತಿದ್ದಾರೆ ಎಂದರು.

ಅನೇಕ ಕಡೆ ವಿದ್ಯಾರ್ಥಿಗಳ ಕೊರತೆಯಿಂದ ಸರ್ಕಾರಿ ಶಾಲೆಗಳನ್ನು ಮುಚ್ಚುವ ಪರಿಸ್ಥಿತಿ ಉದ್ಭವಿಸಿದೆ. ಇನ್ನು ಮುಂದೆ ಪ್ರತಿವರ್ಷ ಸರ್ಕಾರಿ ಶಾಲೆ ಉಳಿಸಿ ಅಭಿಯಾನವನ್ನು ವಂದೇ ಮಾತರಂ ಟ್ರಸ್ಟ್‌ನಿಂದ ಆಯೋಜಿಸಲಾಗುವುದು. ರಾಜ್ಯ ಸರ್ಕಾರ ಪ್ರತಿ ಗ್ರಾಪಂ ಮುಖ್ಯ ಕೇಂದ್ರ ಸ್ಥಾನದಲ್ಲಿ ಸುಸಜ್ಜಿತ ವಸತಿ ಶಾಲೆಗಳನ್ನು ಪ್ರಾರಂಭಿಸಿ ಸಕಲ ಸವಲತ್ತುಗಳನ್ನು ಒದಗಿಸಬೇಕು ಎಂದು ಒತ್ತಾಯಿಸಿದರು.

ಕಸಬಾ ಹೋಬಳಿ ಶಿಕ್ಷಣ ಸಂಯೋಜಕ ಲೋಕೇಶ್ ಮಾತನಾಡಿದರು. ವಂದೇ ಮಾತರಂ ಯುವ ಸಂಘದ ಕಾರ್ಯದರ್ಶಿ ಸುಮಾ, ಕಾರ್ಯದರ್ಶಿ ವಿಕ್ರಮ್, ಸರ್ಕಾರಿ ಬಾಲಿಕಾ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಬಿ.ಆರ್. ರಮೇಶ್, ಸಮೂಹ ಸಂಪನ್ಮೂಲ ವ್ಯಕ್ತಿ ಲಿಂಗರಾಜು, ಮುಖ್ಯಶಿಕ್ಷಕ ಪ್ರಕಾಶ್, ಸರ್ಕಾರಿ ಬಾಲಿಕಾ ಪ್ರೌಢಶಾಲೆ ಹಾಗೂ ಪಿಎಂಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸಹ ಶಿಕ್ಷಕರು ಉಪಸ್ಥಿತರಿದ್ದರು.

# 3 ಕೋಟಿ ರೂ. ವೆಚ್ಚದಲ್ಲಿ ಉದ್ಯಾನ ಅಭಿವೃದ್ಧಿಗೆ ಕ್ರಮ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಪಟ್ಟಣದ ಉದ್ಯಾನಗಳಿಗೆ ಮೂಲಸೌಕರ್ಯ ಕಲ್ಪಿಸಲು ಹಾಗೂ ಅಭಿವೃದ್ಧಿಪಡಿಸಲು 3 ಕೋಟಿ ರೂ. ಅನುದಾನ ಮೀಸಲಾಡಲಾಗುವುದೆಂದು ಶಾಸಕ ಸಿ.ಎನ್. ಬಾಲಕೃಷ್ಣ ತಿಳಿಸಿದರು.

ಪಟ್ಟಣದ ಅಮಾನಿ ಕೆರೆ ದಡದಲ್ಲಿ ಭಾನುವಾರ ಪುರಸಭೆ, ಭೂಮಿ ಉಳಿಸಿ ಆಂದೋಲನ ಸಮಿತಿ, ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್, ಹಿಂದು ಯುವ ಬ್ರಿಗೇಡ್ ಹಾಗೂ ಶ್ರೀ ಪ್ರಸನ್ನ ಗಣಪತಿ ಸೇವಾ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಪಟ್ಟಣದ ಇತಿಹಾಸ ಪ್ರಸಿದ್ಧ ಅಮಾನಿಕೆರೆ ಪುನಶ್ಚೇತನ ಕಾರ್ಯಕ್ರಮದಲ್ಲಿ ಮಾತನಾಡಿ, ಸಾರ್ವಜನಿಕರ ಹಿತದೃಷ್ಟಿಯಿಂದ ಉದ್ಯಾನವನಕ್ಕೆ ಮೂಲಸೌಲಭ್ಯಕ್ಕೆ ಆದ್ಯತೆ ನೀಡಲಾಗಿದೆ. ಉದ್ಯಾನವನದ ಅಕ್ಕಪಕ್ಕದ ಸಾರ್ವಜನಿಕರು ವಾಯುವಿಹಾರ ಮಾಡಲು ಅನುಕೂಲವಾಗುವಂತೆ ವಾಕಿಂಗ್ ಟ್ರ್ಯಾಕ್ ನಿರ್ಮಿಸಲಾಗಿದೆ. ಉದ್ಯಾನಗಳಿಗೆ ಆಗಮಿಸುವ ಮಕ್ಕಳು ಆಟವಾಡಲು ಅನುವಾಗುವಂತೆ ಆಟದ ಉಪಕರಣ ಅಳವಡಿಸಲಾಗಿದೆ. ಉದ್ಯಾನಗಳನ್ನು ರಕ್ಷಿಸಿ ಸೌಂದರ್ಯೀಕರಿಸಿ ಸಾರ್ವಜನಿಕರ ಉಪಯೋಗಕ್ಕೆ ಸಜ್ಜುಗೊಳಿಸಲಾಗಿದೆ. ಉದ್ಯಾನಗಳ ಅಕ್ಕಪಕ್ಕದ ನಾಗರಿಕರು ಹಾಳಾಗದಂತೆ ನೋಡಿಕೊಳ್ಳಬೇಕು. ಆಯಾ ಬಡಾವಣೆಗಳ ನಿವಾಸಿಗಳು ಉದ್ಯಾನ ರಕ್ಷಣಾ ಸಮಿತಿ ರಚಿಸಿ ರಕ್ಷಣೆಯ ಜವಾಬ್ದಾರಿ ಹೊರಬೇಕು ಎಂದರು.

ಸ್ವಚ್ಛತೆ ಕಾಪಾಡುವಲ್ಲಿ ಪುರಸಭೆ ಜೊತೆಗೆ ಸ್ಥಳೀಯ ನಿವಾಸಿಗಳು ಕೈ ಜೋಡಿಸಿದರೆ ಕಸದ ರಾಶಿ ಬೀಳದಂತೆ ಕ್ರಮ ವಹಿಸಬಹುದು. ರಸ್ತೆ ಬದಿಗಳಲ್ಲಿ ಕಸಕಡ್ಡಿಗಳನ್ನು ಹಾಕಿ ಸ್ವಚ್ಛತೆ ಹಾಳು ಮಾಡಬಾರದು. ಸ್ವಚ್ಛಂದ ಪರಿಸರ ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯ. ಪಟ್ಟಣದ ಶ್ರವಣಬೆಳಗೊಳ ರಸ್ತೆಯಲ್ಲಿ ಕಸ ಹಾಕುವವರ ಬಗ್ಗೆ ಮಾಹಿತಿ ನೀಡಿದರೆ ಪುರಸಭೆ ವತಿಯಿಂದ ಬಹುಮಾನ ನೀಡಲಾಗುವುದೆಂದರು.

ಸ್ವಚ್ಛತೆ ಪ್ರತಿಯೊಬ್ಬರ ಆದ್ಯತೆಯಾಗಬೇಕು. ನಮ್ಮ ಮನೆ ಸುತ್ತಮುತ್ತಲಿನ ಪ್ರದೇಶ, ರಸ್ತೆ, ಚರಂಡಿ ಸೇರಿ ಸಾರ್ವಜನಿಕ ಸ್ಥಳಗಳಾದ ಶಾಲೆ, ಆಸ್ಪತ್ರೆ, ಅಂಗನವಾಡಿ, ಸಮುದಾಯ ಭವನ ಸ್ವಚ್ಛವಾಗಿಟ್ಟುಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯ. ಆರೋಗ್ಯ ಕಾಪಾಡಿಕೊಳ್ಳಲು, ಸ್ವಸ್ಥ ಸಮಾಜ ನಿರ್ಮಾಣ ಮಾಡಲು ನಾವೆಲ್ಲರೂ ಪಣ ತೊಡಬೇಕು. ಎಲ್ಲೆಂದರಲ್ಲಿ ರಸ್ತೆ ಬೀದಿಗಳಲ್ಲಿ ಕಸವನ್ನು ಬಿಸಾಡುವುದರಿಂದ ರೋಗ ರುಜಿನಗಳಿಗೆ ಆಹ್ವಾನ ನೀಡಿದಂತಾಗುತ್ತದೆ ಎಂದರು.

ಪುರಸಭೆ ಅಧ್ಯಕ್ಷ ಸಿ.ಎನ್. ಮೋಹನ್, ಉಪಾಧ್ಯಕ್ಷೆ ರಾಣಿಕೃಷ್ಣ, ಸದಸ್ಯರಾದ ಗಣೇಶ್, ರಾಮು, ಮುಖ್ಯಾಧಿಕಾರಿ ಆರ್. ಯತೀಶ್ ಕುಮಾರ್, ಪರಿಸರ ಅಭಿಯಂತರೆ ಕಾವ್ಯಶ್ರೀ, ಆರೋಗ್ಯ ನಿರೀಕ್ಷಕರಾದ ಮಂಜುನಾಥ್, ಉಮಾದೇವಿ, ವೆಂಕಟೇಶ್, ಭೂಮಿ ಉಳಿಸಿ ಆಂದೋಲನ ವೇದಿಕೆ ಸಮಿತಿಯ ಸಿ.ಎನ್. ಅಶೋಕ್, ಮನೋಹರ್ ಮತ್ತಿತರರಿದ್ದರು.

# ನೀಟ್: ಮಾಸ್ಟರ್ಸ್ ಕಾಲೇಜಿನ ಸೃಷ್ಟಿ ಲೋಕೇಶ್ ಜಿಲ್ಲೆಗೆ ಪ್ರಥಮ



ಹಾಸನ: ನೀಟ್ ಪರೀಕ್ಷೆಯಲ್ಲಿ ಜಿಲ್ಲೆಗೆ ಪ್ರಥಮ ರ್‍ಯಾಂಕ್ ಪಡೆದ ಮಾಸ್ಟರ್ಸ್ ಪದವಿ ಪೂರ್ವ ಕಾಲೇಜಿನ ಸೃಷ್ಟಿ ಲೋಕೇಶ್ ಅವರನ್ನು ಸನ್ಮಾನಿಸಿದ ಕಾಲೇಜು ಆಡಳಿತ ಮಂಡಳಿ 50 ಸಾವಿರ ರೂ. ನಗದು ಪುರಸ್ಕಾರದ ಮೂಲಕ ಮುಂದಿನ ವಿದ್ಯಾಭ್ಯಾಸಕ್ಕೆ ಶುಭ ಹಾರೈಸಲಾಯಿತು.

ಮಾಸ್ಟರ್ಸ್ ಪಿಯು ಎಜುಕೇಶನ್ ಟ್ರಸ್ಟ್ ಅಧ್ಯಕ್ಷ ಟಿ.ಹೆಚ್. ರಾಯುಡು ಮಾತನಾಡಿ, ಪಿಯುಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಪ್ರಥಮ ಹಾಗೂ ರಾಜ್ಯಕ್ಕೆ ಮೂರನೇ ರ್‍ಯಾಂಕ್ ಪಡೆದಿದ್ದ ಸೃಷ್ಟಿ ಸಿಇಟಿ ಮತ್ತು ಜೆಇಇಯಲ್ಲಿ ಉತ್ತಮ ಸಾಧನೆ ಮೂಲಕ ಜಿಲ್ಲೆಗೆ ಕೀರ್ತಿ ತಂದಿದ್ದಾರೆ ಎಂದರು.

ಭೌತಶಾಸ್ತ್ರ, ರಸಾಯನ ಶಾಸ್ತ್ರ, ಜೀವಶಾಸ್ತ್ರ ಸೇರಿ ಶೇ. 99.953 ಅಂಕ ಪಡೆಯುವ ಮೂಲಕ ಕಾಲೇಜಿನ ಕೀರ್ತಿ ಹೆಚ್ಚಿಸಿದ್ದಾರೆ. ಅವರ ಮುಂದಿನ ವಿದ್ಯಾಭಾಸವು ಸುಗಮವಾಗಿ ನಡೆಯಬೇಕು. ಯಾವುದೇ ಕೋಚಿಂಗ್ ಇಲ್ಲದೆ ಸಾಧನೆ ಮಾಡಿರುವುದು ಹೆಮ್ಮೆಯ ವಿಚಾರ ಎಂದು ಹೇಳಿದರು.

ವಿದ್ಯಾರ್ಥಿನಿ ಸೃಷ್ಟಿ ಲೋಕೇಶ್ ಮಾತನಾಡಿ, ವಿದ್ಯಾಭ್ಯಾಸ ಅವಧಿಯಲ್ಲಿ ಬೇರೆ ಯಾವುದರ ಕಡೆಗೂ ಗಮನ ಹರಿಸಬಾರದು. ಓದು ಮೊದಲ ಆದ್ಯತೆಯಾಗಬೇಕು. ತಪ್ಪುಗಳನ್ನು ತಿದ್ದಿ ಮುನ್ನಡೆದರೆ ಯಶಸ್ಸು ನಮ್ಮದಾಗುತ್ತದೆ ಎಂದರು.

ಕಾಲೇಜು ಕಾರ್ಯದರ್ಶಿ ಗೌಡೇಗೌಡ, ಬಿ.ಎಸ್. ಮಂಜುನಾಥ್, ಉಪಾಧ್ಯಕ್ಷೆ ಹೆಚ್.ಸಿ. ನಂದಿನಿ ಇತರರು ಉಪಸ್ಥಿತರಿದ್ದರು.

# ನಿಸ್ವಾರ್ಥ ಗೆಳೆಯರ ಬಳಗದಿಂದ ಆಹಾರ ಸಾಮಗ್ರಿ ವಿತರಣೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ನಿಸ್ವಾರ್ಥ ಗೆಳೆಯರ ಬಳಗದ ಮೂರನೇ ವರ್ಷಾಚರಣೆ ಹಿನ್ನಲೆಯಲ್ಲಿ ಶ್ರೀ ಚನ್ನಕೇಶವ ದೇಗುಲಕ್ಕೆ ತರಕಾರಿ ಹಾಗೂ ದಿನಸಿ ಸಾಮಾಗ್ರಿ ವಿತರಣೆ ಮಾಡಲಾಯಿತು.

ಬಳಗದ ಅಧ್ಯಕ್ಷ ಆದೇಶ್ ಮಾತನಾಡಿ, ಪ್ರತಿವರ್ಷದಂತೆ ಈ ವರ್ಷವೂ ಶ್ರೀ ಚನ್ನಕೇಶವ ದೇಗುಲಕ್ಕೆ ದಿನಸಿ ಸಾಮಾಗ್ರಿ ವಿತರಿಸಲಾಗಿದೆ. ಅದರಂತೆ ನಾವು ಅನ್ನ ದಾಸೋಹ ಸೇವೆ ಕೈಗೊಳ್ಳಲಾಗಿದೆ. ನಿಸ್ವಾರ್ಥ ಬಳಗವು ಸಾಮಾಜಿಕ ಕಾರ್ಯಗಳಲ್ಲಿ ಸದಾ ತೊಡಗಿಕೊಂಡಿದೆ. ಪುರಾತನ ದೇವಸ್ಥಾನಗಳ ಸ್ವಚ್ಛತೆ, ಶಾಲಾ ಮಕ್ಕಳಿಗೆ ನೋಟ್ ಬುಕ್ ವಿತರಣೆ, ದಾಸೋಹ ವ್ಯವಸ್ಥೆ, ನಿರ್ಗತಿಕರಿಗೆ ಕೈಲಾದ ಸೇವೆ ಮಾಡುತ್ತಾ ಬಂದಿದ್ದೇವೆ ಎಂದರು.



ನಿಸ್ವಾರ್ಥ ಗೆಳೆಯರ ಬಳಗದ ರಾಜೇಶ್, ಕಾರ್ತಿಕ್, ಸುದರ್ಶನ್, ದೀಪಕ್ ಹಾಜರಿದ್ದರು.

# ಇತಿಹಾಸದಲ್ಲಿ ಈ ದಿನ

## ಜೂನ್-17

**1631:** ಝುಹಾ ಬಾನು (ಮುಮ್‌ತಾಜ್ ಮಹಲ್) ಈ ದಿನ ಮೊಘಲ್ ಬಾದಶಾಹ ಷಾಹ್ ಜಹಾನ್ ಅವರ ಮರುಭಾರತಿಯಾದ ಪತ್ನಿ ಮುಮ್‌ತಾಜ್ ಮಹಲ್ ಅವರು 14ನೇ ಸಂತಾನ ಪ್ರಸವದ ನಂತರ ಮರಣ ಹೊಂದಿದರು. ಇವರ ಸ್ಮರಣಾರ್ಥ ತಾಜ್ ಮಹಲ್ ಕಟ್ಟಲಾಯಿತು.

**1944:** ಸುಭಾಷ್ ಚಂದ್ರ ಬೋಸ್ ನೇತೃತ್ವದ ಆಜಾದ್ ಹಿಂದು ಸೇನೆ ತನ್ನ ಅಲೂರ್ಜಿತ ಭಾರತದ ಸರ್ಕಾರಟಿದ ಚಟುವಟಿಕೆಗಳನ್ನು ತೀವ್ರಗೊಳಿಸಿತು.

**1980:** ಭಾರತೀಯ ಸ್ಪೇಸ್ ರಿಸರ್ಚ್ ಆರ್ಗನೈಸೇಶನ್ ಇಂದಿರಾ ಗಾಂಧಿ ಅವರ ನೇತೃತ್ವದಲ್ಲಿ ಮೊದಲ ಭಾರತೀಯ ಉಪಗ್ರಹ 'ರೋಹಿಣಿ-1' ಅನ್ನು ಸ್ಲಿವ್ ಬಾಹ್ಯಾಕಾಶಕ್ಕೆ ಯಶಸ್ವಿಯಾಗಿ ಉಡಾವಣೆ ಮಾಡಿತು.

### ಜನನ

**1952:** ಪಿ. ಚಿದಂಬರಂ. ಹಿರಿಯ ಕಾಂಗ್ರೆಸ್ ನಾಯಕ, ಭಾರತ ಸರ್ಕಾರದ ಮಾಜಿ ಹಣಕಾಸು ಸಚಿವ.

**1972:** ಗುರುದಾಸ್ ಮಾನ. ಪಂಜಾಬ್‌ನ ಪ್ರಸಿದ್ಧ ಗಾಯಕ ಮತ್ತು ನಟ.

# ಸಾರ್ವಜನಿಕರಲ್ಲಿ ಭಯ ಹುಟ್ಟಿಸಿದ ರಸ್ತೆ ಬದಿ ಮರ-ವಿದ್ಯುತ್ ಕಂಬ

## ಮಳೆ-ಗಾಳಿಗೆ ಧರೆಗುರುಳುವ ಆತಂಕ | ಜೀವ ಭಯದಲ್ಲಿ ಮಲೆನಾಡಿಗರು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲೆಯಲ್ಲಿ ಮುಂಗಾರು ಮಳೆ ಆರ್ಭಟ ಶುರುವಾಗಿರುವ ಬೆನ್ನಲ್ಲೇ ಮರ, ವಿದ್ಯುತ್ ಕಂಬ, ಶಿಥಿಲಾವಸ್ಥೆಯ ಕಟ್ಟಡಗಳು ಧರೆಗುರುಳುವ ಆತಂಕ ಮನೆ ಮಾಡಿದ್ದು ಪೂರ್ವ ಸಿದ್ಧತೆ ಕೈಗೊಳ್ಳಬೇಕಿದ್ದ ಅಧಿಕಾರಿಗಳ ಜಾಣ ಮೌನಕ್ಕೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅಪಾಯದ ಮುನ್ಸೂಚನೆ ಇದ್ದರೂ ಕ್ರಮ ಕೈಗೊಳ್ಳಲು ಅರಣ್ಯ ಹಾಗು ಸೆಸ್ಕಾಂ ನಿರ್ಲಕ್ಷ್ಯ ವಹಿಸುತ್ತಿವೆ ಎಂಬ ದೂರುಗಳು ಕೇಳಿಬಂದಿವೆ. ಸಕಲೇಶಪುರ ತಾಲ್ಲೂಕಿನ ವಡೂರು ಗ್ರಾಮದಲ್ಲಿ ರಸ್ತೆಬದಿ ಬೃಹತ್ ಗಾತ್ರದ ಮರಗಳು ವಾಲಿಕೊಂಡಿದ್ದು ಬೀಳುವ ಹಂತದಲ್ಲಿವೆ. ಅಪಾಯದ ಸ್ಥಿತಿಯಲ್ಲಿರುವ ಮರಗಳನ್ನು ತೆರವುಗೊಳಿಸಲು ಅರಣ್ಯ ಇಲಾಖೆ ವಿಳಂಬ ಮಾಡುತ್ತಿದೆ. ಹೀಗಾಗಿ ಗ್ರಾಮಸ್ಥರು ನಿತ್ಯ ಭಯದಲ್ಲೇ ಓಡಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.



ವಡೂರು ಮಾತ್ರವಲ್ಲದೆ ಮಲೆನಾಡಿನ ಬಹುತೇಕ ಗ್ರಾಮಗಳಲ್ಲಿ ಇದೇ ಪರಿಸ್ಥಿತಿ ಇದೆ. ರಸ್ತೆ ಬದಿಯಲ್ಲಿ ಸಾಕಷ್ಟು ಮರಗಳು ಒಣಗಿದ ಸ್ಥಿತಿಯಲ್ಲಿ ಇದ್ದು, ಮಳೆ-ಗಾಳಿಗೆ ಮುರಿದು ಬೀಳುವ ಆತಂಕ ಎದುರಾಗಿದೆ. ಜೊತೆಗೆ ಕೆಲವೆಡೆ ರಸ್ತೆ ಬದಿಯ ಮರಗಳು ವಿದ್ಯುತ್ ಕಂಬ, ತಂತಿಗೆ ತಾಗುತ್ತಿದ್ದು, ಅಪಾಯ ತಂದೊಡ್ಡುವ ಸಾಧ್ಯತೆಯಿದೆ. ರಸ್ತೆ ಬದಿ ಬಾಗಿರುವ ಮರಗಳನ್ನು ತೆರವುಗೊಳಿಸುವಂತೆ ಮೂರು ವರ್ಷದಿಂದಲೂ ಗ್ರಾಮಸ್ಥರು ಅರಣ್ಯ ಇಲಾಖೆಗೆ ಮನವಿ ಸಲ್ಲಿಸುತ್ತಿದ್ದರೂ ಅರಣ್ಯ ಇಲಾಖೆ ಮಾತ್ರ ಮರಗಳನ್ನು ತೆರವುಗೊಳಿಸಲು ಹಿಂದೇಟು ಹಾಕುತ್ತಿದೆ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಗಮನ ಹರಿಸದ ಗ್ರಾ.ಪಂ.

ಗ್ರಾಮದ ರಸ್ತೆ ಬದಿ ಅಪಾಯದ ಸ್ಥಿತಿಯಲ್ಲಿರುವ ಮರಗಳ ತೆರವು ಮಾಡುವಂತೆ ಕಳೆದ ಮೂರು ವರ್ಷಗಳಿಂದ ಅರಣ್ಯ ಇಲಾಖೆ ಹಾಗೂ ಕುನಿಗನಹಳ್ಳಿ ಗ್ರಾಮ ಪಂಚಾಯಿತಿಗೆ ಮನವಿ ಸಲ್ಲಿಸಲಾಗುತ್ತಿದೆ. ಅಲ್ಲದೆ ಗ್ರಾಮಸಭೆ ಮತ್ತು ವಾರ್ಡ್ ಸಭೆಗಳಲ್ಲೂ ಗಮನ ಸೆಳೆಯಲಾಗಿದ್ದರೂ ಯಾವ ಪ್ರಯೋಜನವಾಗಿಲ್ಲ. ಗ್ರಾಮ ಪಂಚಾಯಿತಿಯವರು ಅರಣ್ಯ ಇಲಾಖೆ ಮೇಲೆ ಹಾಗೂ ಅರಣ್ಯ ಇಲಾಖೆಯವರು ಗ್ರಾಮ ಪಂಚಾಯಿತಿ ಮೇಲೆ ಹೊಣೆ ಹೊರಿಸುತ್ತಾ ಕಾಲಹರಣ ಮಾಡುತ್ತಿದ್ದಾರೆ ವಿನಃ ಸಮಸ್ಯೆ ಮಾತ್ರ ಬಗೆಹರಿಸುತ್ತಿಲ್ಲ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ತಪ್ಪಿದ ಭಾರೀ ಅನಾಹುತ

ಕಳೆದ ಎರಡು ದಿನಗಳಿಂದ ನಿರಂತರವಾಗಿ ಸುರಿಯುತ್ತಿರುವ ಭಾರೀ ಮಳೆಗೆ ವಡೂರು ಗ್ರಾಮದಲ್ಲಿ ರಸ್ತೆ ಬದಿಯ ಅಕೇಶಿಯಾ ಮರ ವಿದ್ಯುತ್ ತಂತಿ ಮೇಲೆ ಮುರಿದು ಬಿದ್ದಿದೆ. ಪ್ರತಿದಿನ ಗ್ರಾಮಸ್ಥರು ತಮ್ಮ ತೋಟ, ಗದ್ದೆಗಳಿಗೆ ಇದೇ ರಸ್ತೆಯಲ್ಲೇ ಸಂಚರಿಸುತ್ತಾರೆ. ಅದೃಷ್ಟವಶಾತ್ ಮರ ಬಿದ್ದ ಸಮಯದಲ್ಲಿ ವಿದ್ಯುತ್ ಇಲ್ಲದೆ ಇದ್ದಿದ್ದರಿಂದ ಭಾರೀ ಅಪಾಯ ತಪ್ಪಿದೆ.

ವಡೂರು ಗ್ರಾಮದಲ್ಲಿ 87 ಎಕರೆ ಮೀಸಲು ಅರಣ್ಯ ಇದೆ. ಹೀಗಾಗಿ ಕಾಡಾನೆಗಳು ಈ ಅರಣ್ಯದಲ್ಲೇ ಹೆಚ್ಚು ಬೀಡು ಬಿಡುತ್ತವೆ. ಅರಣ್ಯವಷ್ಟೇ ಅಲ್ಲದೆ ಅಕ್ಕಪಕ್ಕದ ಕಾಫಿ ತೋಟ, ಗದ್ದೆಗಳಿಗೂ ಲಗ್ಗೆ ಇಟ್ಟು ಬೆಳೆ ಹಾನಿ ಮಾಡುವುದು ಮಾಮೂಲಾಗಿದೆ. ಮೂರು ಆನೆಗಳು ಇದೇ ಅರಣ್ಯದಲ್ಲಿ ಬೀಡು ಬಿಟ್ಟಿವೆ. ರಸ್ತೆಬದಿ ಆಳೆತ್ತರ ಕಾಡು ಬೆಳೆದು ನಿಂತಿದ್ದು ರಸ್ತೆಯಲ್ಲಿ ಸಂಚರಿಸುವವರಿಗೆ ಕಾಡಾನೆಗಳು ರಸ್ತೆ ಬದಿ ನಿಂತರೂ ಕಾಣಿಸುವುದಿಲ್ಲ

> ರಸ್ತೆ ಬದಿ ಅಪಾಯದ ಸ್ಥಿತಿಯಲ್ಲಿರುವ ಮರಗಳನ್ನು ತೆರವುಗೊಳಿಸಲು ಕ್ರಮ ವಹಿಸಲಾಗುವುದು. ಅರಣ್ಯದೊಳಗೆ ಹಾದು ಹೋಗಿರುವ ವಿದ್ಯುತ್ ಮಾರ್ಗವನ್ನು ಬದಲಿಸಲು ನೀಲನಕ್ಷೆ ತಯಾರಿಸಿ ಸೆಸ್ಕಾಂಗೆ ಪ್ರಸ್ತಾವನೆ ಸಲ್ಲಿಸಲಾಗಿದೆ.
>
> **- ಮಧುಸೂಧನ್, ಎಸಿಎಫ್ ಸಕಲೇಶಪುರ**

### ಅಧಿಕಾರಿಗಳಲ್ಲಿ ಹೊಂದಾಣಿಕೆ ಕೊರತೆ

ಗ್ರಾಮಕ್ಕೆ ವಿದ್ಯುತ್ ಸಂಪರ್ಕ ಕಲ್ಪಿಸಲು ಅರಣ್ಯದೊಳಗೆ ವಿದ್ಯುತ್ ಕಂಬಗಳನ್ನು ಹಾಕಲಾಗಿದೆ. ಹೀಗಾಗಿ ಪ್ರತಿ ವರ್ಷ ಮಳೆಗಾಲದಲ್ಲಿ ಮರಗಳು ವಿದ್ಯುತ್ ತಂತಿ ಮೇಲೆ ಬೀಳುವುದು ಸಾಮಾನ್ಯವಾಗಿದ್ದು ಅರಣ್ಯದೊಳಗೆ ವಿದ್ಯುತ್ ತಂತಿ ಮೇಲೆ ಮರ ಬಿದ್ದರೆ ಕನಿಷ್ಟ 15 ದಿನಗಳ ಕಾಲ ಗ್ರಾಮವು ವಿದ್ಯುತ್ ಇಲ್ಲದೆ ಕತ್ತಲೆಯಲ್ಲೇ ಮುಳುಗಿರುತ್ತದೆ.

ಅರಣ್ಯದೊಳಗೆ ಹಾದುಹೋಗಿರುವ ವಿದ್ಯುತ್ ಕಂಬದ ಪಕ್ಕದಲ್ಲಿರುವ ಮರದ ಕೊಂಬೆಗಳನ್ನು ತೆರವುಗೊಳಿಸಲು ವಿದ್ಯುತ್ ಕಡಿತಗೊಳಿಸಿ ಎಂದಾಗ ಸೆಸ್ಕ್ ಅಧಿಕಾರಿಗಳು ಸ್ಪಂದಿಸುವುದಿಲ್ಲ.

ಸೆಸ್ಕಾಂ ವಿದ್ಯುತ್ ಸಂಪರ್ಕ ಕಡಿತಗೊಳಿಸಿ ಮರಗಳನ್ನು ತೆರವುಗೊಳಿಸಿ ಎಂದಾಗ ಅರಣ್ಯ ಇಲಾಖೆಯವರು ಸ್ಪಂದಿಸುವುದಿಲ್ಲ. ಹೀಗಾಗಿ ಅಪ್ಪ ಅಮ್ಮನ ಜಗಳದಲ್ಲಿ ಕೂಸು ಬಡವಾಯಿತು ಎಂಬ ಗಾದೆಯಂತೆ ಅರಣ್ಯ ಇಲಾಖೆ ಹಾಗೂ ಸೆಸ್ಕ್ ಕಿತ್ತಾಟದಿಂದ ಗ್ರಾಮಸ್ಥರು ಕತ್ತಲೆಯಲ್ಲಿ ದಿನಕಳೆಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248